ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು

ಕೃಷಿ ಹವಾಮಾನ ವಿಭಾಗ, ಜಿ.ಕೆ.ವಿ.ಕೆ, ಬೆಂಗಳೂರು–65

ರಾಗುಟ್ಟಹಳ್ಳಿಯ ಕೃಷಿ ಹವಾಮಾನ ಮುನ್ಸೂಚನೆ

ದಿನಾಂಕ: 12.2.16

ಈ ವಾರದ ಮುನ್ಸೂಚನೆ (13-2-16 to 17.2.16 ವರೆಗೆ)

ನಿಯತಾಂಕಗಳು	13/2/16	14/2/16	15/2/16	16/2/16	17/2/16
ಮಳೆ (ಮಿ ಮಿ)	0	0	0	0	5
ಗರಿಷ್ಠ ಉಷ್ಣಾಂಶ(ಡಿ.ಸೆ.)	31	30	30	30	27
ಕನಿಷ್ಠ ಉಷ್ಣಾಂಶ (ಡಿ.ಸೆ.)	16	14	17	17	19
ಮೋಡ (ಪ್ರಮಾಣ)	2	1	5	7	7
ಅರ್ದ್ರತೆ ೭.೨೦ ಬೆ (ಶೇ)	83	98	63	84	94
ಅರ್ದ್ರತೆ ೨.೨೦ ಮ (ಶೇ)	29	27	23	19	54
ಗಾಳಿಯ ವೇಗ (ಕಿ.ಮಿ/ಗಂಟೆಗೆ)	13	11	15	17	20
ಗಾಳಿಯ ದಿಕ್ಕು (ಡಿಗ್ರಿ)	168	135	110	112	112

ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆಯ ಪ್ರಕಾರ ರಾಗುಟ್ಟಹಳ್ಳಿ ಹಾಗೂ ಸುತ್ತಮುತ್ತ ಮುಂದಿನ ಐದು ದಿನಗಳು ಒಣ ಹವೆ ಮುಂದುವರೆಯಲಿದ್ದು, ಕೆಲವೊಮ್ಮೆ ಭಾಗಶಃ ಮೋಡ ಕವಿದ ವಾತಾವರಣ ಇರಲಿದೆ. ದಿನದ ಗರಿಷ್ಠ ಉಷ್ಣಾಂಶವು 27-31°C ಮತ್ತು ಕನಿಷ್ಠ 14-19°C ಇರಲಿದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ 63-98 % ಇದ್ದು, ಮಧ್ಯಾಹ್ನ 11-20 % ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ 15-20 ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

- ✓ ಹಿಂಗಾರಿನಲ್ಲಿ ಬಿತ್ತನೆಯಾದ ಬೆಳೆಗಳಿಗೆ ನೀರು ಕೊಡಬೇಕು.
- ✓ ಕೊಯ್ಲು ಮಾಡಿದ ರಾಗಿ, ಜೋಳ ಇನ್ನಿತರ ಧಾನ್ಯಗಳನ್ನು ಬಿಸಿಲಿನಲ್ಲಿ ಚೆನ್ನಾಗಿ ಒಣಗಿಸಿ, ಒಕ್ಕಣೆ ಮಾಡಿ ಶುಚಿಗೊಳಿಸಿ ಚೀಲಗಳಲ್ಲಿ ಶೇಖರಣೆ ಮಾಡುವುದು
- ✓ ಜಾನುವಾರು: ಕೊಟ್ಟಿಗೆಯನ್ನು ಶುಚಿಯಾಗಿ ಇಟ್ಟುಕೊಳ್ಳುವುದು ಮತ್ತು ಜಾನುವಾರುಗಳನ್ನು ಚಳಿಯಿಂದ ರಕ್ಷಿಸಬೇಕು. ಜಾನುವಾರು, ರೇಷ್ಮೆ ಹಾಗೂ ಕೋಳಿ ಸಾಕಣೆ ಕೊಠಡಿಯ ಉಷ್ಣಾಂಶದ ಸ್ಥಿರತೆಯನ್ನು ಕಾಪಾಡಿಕೊಳ್ಳುವುದು.
- ✓ ಕರು ಹಾಗೂ ಗರ್ಭಿಣಿ ಹಸು ಎಮ್ಮೆಗಳಿಗೆ ಜಂತುನಾಶಕ ಔಷಧಿಯನ್ನು ಪಶುವೈದ್ಯರ ಮಾರ್ಗದರ್ಶನದಲ್ಲಿ ಕುಡಿಸಬೇಕು.
- ✓ ಹಾಲು ಕೊಡುವ ಪ್ರಾಣಿಗಳಿಗೆ ಅವು ಕೊಡುವ ಹಾಲಿನ ಆದಾರದ ಮೇಲೆ ಆಹಾರವನ್ನು ಕೊಡಬೇಕು
- ✓ ಹಣ್ಣಿನ ಮರಗಳ ತೋಟದಲ್ಲಿ (ಮಾವು, ಸೀಬೆ) ನೆಲಕ್ಕೆ ತಾಕುವ ರೆಂಬೆ ಕೊಂಬೆಗಳನ್ನು ಕತ್ತರಿಸಿ ಕೀಟ ರೋಗಗಳಿಂದ ರಕ್ಷಿಸುವುದು

ಸಸ್ಯ ಸಂರಕ್ಷಣೆ:

- ✓ ಬೂದಿ ರೋಗ ಹರಡುವ ಸಾಧ್ಯತೆ ಇರುವುದರಿಂದ ಸೂಕ್ತ ಸಸ್ಯ ಸಂರಕ್ಷಣಾ ಕ್ರಮಗಳನ್ನು ಕೈಗೊಳ್ಳುವುದು.
- ✓ **ರಸ ಹೀರುವ ಕೀಟಗಳು ಕಂಡು ಬಂದರೆ ಬೇವಿನ ಕಷಾಯ (ಶೇ.೫) ಅಥವಾ ಬೇವಿನ ಎಣ್ಣೆ ಅಥವಾ ಇಮಿಡಕ್ಲೋಪ್ರಿಡ್ ಸಿಂಪಡಿಸಿ.**

ಮಾವಿನ ಬೆಳೆಗೆ ವಿಶೇಷ ಕೃಷಿ ಹವಾಮಾನ ಸಲಹೆಗಳು:

- ✓ ಕಳೆದ ಒಂದು ತಿಂಗಳಿನಿಂದ ಶುಷ್ಕ ವಾತಾವರಣವಿರುವುದರಿಂದ ಮಾವು ಬೆಳೆಯಲ್ಲಿ ಹೂ ಬಿಡುವ ಸಂಖ್ಯೆ ಹೆಚ್ಚಿದ್ದು ಮತ್ತು ಬೂದಿರೋಗದ ಸಂಭವ ಹೆಚ್ಚಾಗಿ ಕಂಡುಬಂದಿರುತ್ತದೆ.

- ✓ ಹೂ ಬಿಡುವುದಕ್ಕೆ ಮುಂಚೆ ಹಾಗೂ ಕಾಯಿ ಕಚ್ಚಿದ ಕೂಡಲೇ ಕಂಡುಬರುವ ಜಿಗಿಹುಳು ನಿಯಂತ್ರಣಕ್ಕಾಗಿ ಗಿಡಗಳಿಗೆ 4ಗ್ರಾಂ ಕಾರ್ಬರಿಲ್ (50 wp) ಅಥವಾ 0.3 ಮಿ.ಲೀ ಇಮಿಡಾಕ್ಲೋಪ್ರಿಡ್ 200.ಎಸ್.ಎಲ್ ಅಥವಾ 0.5 ಮಿ.ಲೀ ಲ್ಯಾಂಡಾಸೈಯೋಲೋಥ್ರಿನ್ (5 ಇಸಿ) ಸಿಂಪಡಿಸಬೇಕು.

- ✓ ಜೊತೆಗೆ ಬೂದಿ ರೋಗದ ನಿಯಂತ್ರಣಕ್ಕಾಗಿ ನೀರಿನಲ್ಲಿ ಕರಗುವ ಗಂಧಕ (ಸಲ್ ಟಾಫ್ 80wp) 3ಗ್ರಾಂ. ಪ್ರತಿ ಲೀಟರ್ ನೀರಿನಲ್ಲಿ ಮಿಶ್ರ ಮಾಡಿ ಸಿಂಪಡಿಸಿ.

- ✓ ಜಿಗಿಹುಳುವಿನ ಹಾವಳಿ ತೀವ್ರವಾಗಿದ್ದಲ್ಲಿ ಅಝಾಡಿರೆಕ್ಟಿನ್ (10,000 ಪಿ.ಪಿ.ಎಮ್) 7 ಮಿ.ಲೀ/ಲೀ ನೀರಿನಲ್ಲಿ ಸಿಂಪಡಿಸಿ.

- ✓ ಬದನಿಕೆ ಪರಾವಲಂಬಿ ಸಸ್ಯ ಬೆಳೆದಿರುವ ಕೊಂಬೆಯನ್ನು ಪೂರ್ತಿ ಕತ್ತರಿಸಿ ತೆಗೆಯಿರಿ. ಕತ್ತರಿಸಿದ ಭಾಗಕೆ ತಾಮ್ರದ ಆಕ್ಸಿ ಕ್ಲೋರೈಡ್ ಶಿಲೀಂದ್ರನಾಶಕ ದ್ರಾವಣ ಅಥವಾ ಬೋರ್ಡೊ ಮುಲಾಮನ್ನು ಲೇಪಿಸಬೇಕು.

- ✓ ಮಾವಿನ ಮರದ ಕೆಳಗೆ ಬೆಳೆದಿರುವ ಕಳೆಗಿಡಗಳನ್ನು ಕಡಿದುಹಾಕಿ ಸ್ವಚ್ಚಗೊಳಿಸಬೇಕು.

- ✓ ಭೂಮಿಗೆ ತಾಕುವ ರೆಂಬೆ ಕೊಂಬೆಗಳನ್ನು ಕತ್ತರಿಸಿ ಕೀಟ ಮತ್ತು ರೋಗಗಳಿಂದ ರಕ್ಷಿಸುವುದು.

- ✓ ಮಾವಿನ ಗಿಡದ ಕೆಳಗೆ ಬೆಳೆದಿರುವ ಹುತ್ತಗಳನ್ನು ನಾಶಪಡಿಸಬೇಕು ಮತ್ತು ಗೆದ್ದಲು ಹುಳುಗಳನ್ನು ನಾಶಪಡಿಸಲು ಕ್ಲೋರೊಪೈರಿಫಾಸ್ 5–10 ಮಿ.ಲೀ/ಪ್ರತಿ ಲೀ ನೀರಿಗೆ ಬೆರಸಿ ಹುತ್ತಗಳಿಗೆ ಸುರಿಯಬೇಕು ಅಥವಾ ಒಂದು ಮೀಟರ್ ಸುತ್ತಳತೆ ಇರುವ ಹುತ್ತಕ್ಕೆ 2 ಅಲ್ಯೂಮಿನಿಯಂ ಪಾಸ್ಫೈಡ್ ಮಾತ್ರೆಗಳನ್ನು ಹಾಕಿ ಗಾಳಿ ಹೊರ ಹೋಗದಂತೆ ಎಲ್ಲಾ ರಂಧ್ರಗಳನ್ನು ಹಸಿ ಮಣ್ಣಿನಿಂದ ಮುಚ್ಚಬೇಕು.

- ✓ ಹೂ ಹೆಚ್ಚಾಗಲು ನೈಟ್ರೊಬೆಂಜಿನ್‌ನನ್ನು ನಿಯಮಿತವಾಗಿ (35% ನೈಟ್ರೊಬೆಂಜಿನ್‌ನನ್ನು 2–3ಮಿ.ಲೀ) ಸಿಂಪಡಿಸಬೇಕು

ನೋಡಲ್ ಅಧಿಕಾರಿ:
ಕೃಷಿ ಹವಾಮಾನ ವಿಭಾಗ
ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು